ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/02/2016-17.. ದಿನಾಂಕ:06-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಕಾಲು ಸಿದ್ದಪ್ಪ<br>2)ಶಿದ್ಲಿಂಗಪ್ಪ<br>3)ತಿಪ್ಪಯ್ಯ<br>4)ಕರಿಬಸಮ್ಮ ಗಂಡ ಲೇಟ್ ಎಂ.ನಾಗರಾಜ<br>ಹಾರಕಬಾವಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಬೆಳ್ಳಿಕಟ್ಟೆ ಗ್ರಾಮದ ಸನಂ 7. ವಿಸ್ತೀರ್ಣ 9-78 ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಬೆಳ್ಳಿಕಟ್ಟೆ ಗ್ರಾಮದ ಸನಂ 7. ವಿಸ್ತೀರ್ಣ 9-78 ಎಕ್ರೆ ಜಮೀನನ್ನು ಸದರಿ ತಾಲೂಕು ಹಾರಕಭಾವಿ ಗ್ರಾಮದ ಕರಿಬಸಮ್ಮ ಗಂಡ ಎಂ.ನಾಗರಾಜ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಬೆಳ್ಳಿಕಟ್ಟೆ ಇವರು ನಮೂನೆ-21 ನೋಟಿಸನ್ನು ದಿನಾಂಕ 18-01-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಮರಣ ದೃಡಿಕರಣ ಲಗತ್ತಿಸಿರುವುದಿಲ್ಲ ಮತ್ತು ವಂಶವೃಕ್ಷ ತಾಳೆ ಇರುವುದಿಲ್ಲ ಹಾಗೂ ಜಂಟಿ ಪಟ್ಟದಾರರು ನಮೂನೆ-21ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 30/2015-16. ದಿನಾಂಕ 24-02-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 16-05-2016 ರಿಂದ 06-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಬೆಳ್ಳಿಕಟ್ಟೆ ಗ್ರಾಮದ ಸನಂ 7.ವಿಸ್ತೀರ್ಣ 9-78 ಎಕ್ರೆ ಜಮೀನು ನಮ್ಮ ತಾಯಿಯವರಾದ ತಿಪ್ಪಮ್ಮ ಗಂಡ ಲೇಟ್ ಓಬಯ್ಯ ಇವರ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ಕ ದಾಖಲೆ ಇರುತ್ತದೆ. ಇವರು ದಿನಾಂಕ 02-11-2007 ರಂದು ನಿಧನ ಹೊಂದಿರುತ್ತಾರೆ. ಕಾರಣ ಸದರಿ ತಿಪ್ಪಮ್ಮ ಗಂಡ ಲೇಟ್ ಓಬಯ್ಯ ಇವರ ಹೆಸರನ್ನು ಕಡಿಮೆ ಮಾಡಿ ಪೋತಿವಾರಸು ಹಕ್ಕಿನ ಪ್ರಕಾರ ಪೂರ್ವ ಪಟ್ಟದಾರರ ಜೊತೆ ಜಂಟಿಯಾಗಿ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

52



ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಲಭ್ಯವಿದ್ದ ದಾಖಲೆಗಳನ್ನು ಪರಿಶೀಲಿಸಿ ಪೋತಿವಾರಸು ಹಕ್ಕಿನ ಪ್ರಕಾರ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಬೆಳ್ಳಿಕಟ್ಟೆ ಗ್ರಾಮದ ಸನಂ 7. ವಿಸ್ತೀರ್ಣ 9–78 ಎಕ್ರೆ ಜಮೀನಿನಲ್ಲಿ ತಿಪ್ಪಮ್ಮ ಗಂಡ ಲೇಟ್ ಓಬಯ್ಯ ಇವರ ಹೆಸರನ್ನು ಕಡಿಮೆ ಮಾಡಿ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಕರಿಬಸಮ್ಮ ಗಂಡ ಎಂ.ನಾಗರಾಜ ಹಾರಕಬಾವಿ ಗ್ರಾಮ ಇವರ ಹೆಸರನ್ನು ಪೂರ್ವ ಪಟ್ಟದಾರರ ಜೊತೆ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 06–06–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕರಿಬಸಮ್ಮ ಗಂಡ ಎಂ.ನಾಗರಾಜ ಹಾಗೂ ಇತರರು ಹಾರಕಬಾವಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.